**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ. ನರಸೀಪುರ**

**ಸಿ ಸಿ ಸಂಖ್ಯೆ:489/2025**

# ಆಪಾದನೆ

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಸಂಪತ್ತು ಕೆ ಬಿನ್ ಕೆಂಪಯ್ಯ
45 ವರ್ಷ, ವಾಸಃ ಕೆ ಎಸ್ ಆರ್ ಟಿ ಸಿ ಬಸ್ ಚಾಲಕ,
ಮಾಂಬಳ್ಳಿ ಗ್ರಾಮ, ಕೊಳ್ಳೇಗಾಲ ತಾಲ್ಲೂಕು,
ಚಾಮರಾಜನಗರ ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಎನೆಂದರೆ–

ದಿನಾಂಕ 28.05.2025 ರಂದು ಸಂಜೆ 7.30 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೊಲೀಸ್ ಠಾಣೆ ವ್ಯಾಪ್ತಿಯ, ತಿ ನರಸೀಪುರ - ಕೊಳ್ಳೇಗಾಲ - ಮೈಸೂರು ಮುಖ್ಯ ರಸ್ತೆಯ ತಿ. ನರಸೀಪುರ ಪಟ್ಟಣದ ಹೊಸ ಕಪಿಲಾ ಸೇತುವೆಯಲ್ಲಿ, ಆರೋಪಿಯಾದ ನೀವು ಕೆ ಎಸ್ ಆರ್ ಟಿ ಸಿ ಬಸ್ ಸಂಖ್ಯೆ ಕೆಎ–09–ಎಫ್–5411 ನ್ನು ಅತಿ ವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿ ಅದನ್ನು ತಕ್ಷಣ ಬ್ರೇಕ್ ಹಾಕಿದ ಪರಿಣಾಮ ಬಸ್ಸಿನ ಮುಂಭಾಗದಲ್ಲಿ ಕುಳಿತಿದ್ದ ಚಾಸಾ–1/ಉಮಾ. ಬಿ ರವರು ಕೆಳಗೆ ಬಿದ್ದು ಅವರಿಗೆ ತೀವ್ರ ಸ್ವರೂಪದ ಗಾಯ ಉಂಟು ಮಾಡುವ ಭಾರತೀಯ ನ್ಯಾಯಾ ಸಂಹಿತೆ ಕಲಂ 281 ಮತ್ತು 125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆ: ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ: ಹೌದು

ಪ್ರಶ್ನೆ: ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರ: ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ: 07.03.2026.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.